(ಇಂದು ದಿನಾಂಕಃ **18-02-2026** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

**ಮುಂದುವರೆದ ಪಾಟೀ ಸವಾಲುಃ 2 ನೇ ಪ್ರತಿವಾದಿ ಪರ ಶ್ರೀ ಎಂ ಟಿ ಎಚ್ ವಕೀಲರಿಂದಃ**

ನಿಡಿ-1 ರಲ್ಲಿ ನನ್ನ ತಂದೆ, ತಾಯಿ ಹಾಗೂ ಸಹೋದರರ ಹೆಸರು ನಮೂದಾಗಿದೆ ಎಂದರೆ ಸರಿ. ನನ್ನ ಮದುವೆಯನ್ನು ನನ್ನ ತಂದೆ ತಾಯಿ ನೆರವೇರಿಸಿರುತ್ತಾರೆ ಎಂದರೆ ಸರಿ. ನಮ್ಮ ಕುಟುಂಬಕ್ಕೆ ವಾರ್ಷಿಕವಾಗಿ ಇದ್ದ ಆದಾಯ ಹಾಗೂ ವೆಚ್ಚಕ್ಕೆ ಸಂಬಂಧಿಸಿ ದಾಖಲೆಗಳನ್ನು ಹಾಜರು ಪಡಿಸಿರುವುದಿಲ್ಲ. ನಮ್ಮ ಕುಟುಂಬಕ್ಕೆ ವಾರ್ಷಿಕವಾಗಿ ಎಷ್ಟು ಹಣ ಉಳಿತಾಯವಾಗುತ್ತಿತ್ತು ಎಂದು ಹೇಳಲಾಗುವುದಿಲ್ಲ. ನಮ್ಮ ಕುಟುಂಬಕ್ಕೆ ಯಾವುದೇ ರೀತಿ ಹಣಕಾಸಿನ ಅಡಚಣೆ ಇರಲಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ರುಣಭಾರ ಪ್ರಮಾಣ ಪತ್ರ ತೋರಿಸಲಾಗಿ ಅದನ್ನು ನೋಡಿ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ನನ್ನ ತಂದೆ 2013 ರಿಂದ 2022 ರವರೆಗೆ ವಿವಿಧ ಬ್ಯಾಂಕ್ ಗಳಲ್ಲಿ ಸಾಲ ಪಡೆದ ಬಗ್ಗೆ ಸದರಿ ಪ್ರಮಾಣ ಪತ್ರದಲ್ಲಿ ನಮೂದಾಗಿರುತ್ತದೆ ಎಂದರೆ ಸರಿ. ಸಾಕ್ಷಿಯು ಸದರಿ ದಾಖಲೆಯನ್ನು ನೋಡಿ ಗುರುತಿಸಿದ ಕಾರಣ ಅದನ್ನು **ನಿಡಿ-2** ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿರುವ ವಿಷಯ ನನಗೆ ಗೊತ್ತಿರುತ್ತದೆ. ನನ್ನ ತಂದೆ ನಮ್ಮ ಮನೆತನದ ಕರ್ತನಾಗಿ ಕೆಲಸ ನಿರ್ವಹಿಸುತ್ತಿದ್ದ ಎಂದರೆ ಸರಿಯಲ್ಲ. ನನ್ನ ತಂದೆ ಮೊದಲಿನಿಂದ ಮನೆತನದ ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದ ಎಂದರೆ ಸಾಕ್ಷಿಯು 2016 ರಿಂದ ನಿರ್ವಹಿಸಿರುವುದಿಲ್ಲ ಎಂದು ನುಡಿದಿರುತ್ತಾರೆ. ಸದರಿ ಅಂಶವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕಾರಣ ನನ್ನ ತಂದೆ ಮನೆತನದ ಅಡಚಣೆಗಾಗಿ ನಾಯಕನೂರು ಗ್ರಾಮದ ಜಮೀನು ಸರ್ವೇ ನಂಃ 141/2 ಕ್ಷೇತ್ರ 4 ಎಕರೆ 12 ಗುಂಟೆ ಹಾಗೂ ಶಲವಡಿ ಗ್ರಾಮದ ಜಮೀನು ಸರ್ವೇ ನಂಃ 457/2 ಕ್ಷೇತ್ರ 5 ಎಕರೆ ಜಮೀನು ಮಾರಾಟಕ್ಕಿಟ್ಟಿದ್ದರು ಎಂದರೆ ಸರಿಯಲ್ಲ. ಆಗ 8 ನೇ ಪ್ರತಿವಾದಿ ಸದರಿ ಜಮೀನುಗಳನ್ನು ಖರೀದಿಸುವ ಬಗ್ಗೆ ನನ್ನ ತಂದೆಯೊಂದಿಗೆ ನೋಂದಾಯಿತ ಖರೀದಿ ಕರಾರು ಪತ್ರ ಮಾಡಿಕೊಂಡು ರೂ. 8,75,000/- ಗಳಿಗೆ ಒಪ್ಪಿಕೊಂಡು ರೂ. 7,25,000/- ಗಳನ್ನು ಮುಂಗಡವಾಗಿ ಪಾವತಿಸಿದ್ದರು ಎಂದರೆ ಸರಿಯಲ್ಲ. ಸದರಿ ವ್ಯವಹಾರದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಬಾಕಿ ಉಳಿದ ಹಣವನ್ನು ಖರೀದಿ ನೋಂದಣಿ ಮಾಡಿಸುವ ವೇಳೆ ಕೊಡುವ ಕರಾರಾಗಿತ್ತು ಎಂದರೆ ನನಗೆ ಗೊತ್ತಿಲ್ಲ. ಸದರಿ ವಿಷಯ ನನಗೆ, ನನ್ನ ತಾಯಿಗೆ ಗೊತ್ತಿತ್ತು ಎಂದರೆ ಸರಿಯಲ್ಲ. ನಂತರ ನನ್ನ ತಂದೆ ಹಾಗೂ 8 ನೇ ಪ್ರತಿವಾದಿ ರಾಜೀ ಮಾಡಿಕೊಂಡು ಸದರಿ ಖರೀದಿ ಕರಾರು ಪತ್ರವನ್ನು ದಿನಾಂಕಃ 04-08-2017 ರಂದು ರದ್ದು ಮಾಡಿಕೊಂಡು ಮುಂಗಡ ಹಣವನ್ನು ಮರು ಪಾವತಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಅದೇ ದಿನ ನನ್ನ ತಂದೆ 2 ನೇ

ಪ್ರತಿವಾದಿಗೆ ಜಮೀನು ಸರ್ವೇ ನಂಃ 141/2 ಕ್ಷೇತ್ರ 4 ಎಕರೆ 12 ಗುಂಟೆ ಜಮೀನನ್ನು ರೂ.6,98,000/- ಗಳಿಗೆ ಖರೀದಿ ಮಾಡಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಭೋಜ ತೆಗೆಸುವುದಾಗಿ ತಿಳಿಸಿ ಸಹಿ ಮಾಡಿಸಿಕೊಂಡಿರುತ್ತಾರೆ ಎಂದು ನುಡಿದಿರುತ್ತಾರೆ. ಸದರಿ ಜಮೀನನ್ನು ಭೋಜ ತೆಗೆಸಲು ಹಾಗೂ ಕುಟುಂಬ ಅಡಚಣೆಗಾಗಿ ನನ್ನ ತಂದೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಖರೀದಿ ಪತ್ರಕ್ಕೆ ನನ್ನ ತಾಯಿ ಹಾಗೂ 7 ನೇ ಪ್ರತಿವಾದಿ ಸಹಿ ಮಾಡಿರುತ್ತಾರೆ ಎಂದರೆ ಭೋಜ ತೆಗೆಸುವುದಾಗಿ ತಿಳಿಸಿ ಸಹಿ ಮಾಡಿಸಿಕೊಂಡಿರುತ್ತಾರೆ ಎಂದು ನುಡಿದಿರುತ್ತಾರೆ. ಸದರಿ ಖರೀದಿಯಾದಾಗಿನಿಂದ 2 ನೇ ಪ್ರತಿವಾದಿ ಸದರಿ ಜಮೀನಿನ ಕಬ್ಜಾದಲ್ಲಿದ್ದಾರೆ ಎಂದರೆ ಸರಿಯಲ್ಲ. ಸಾಕ್ಷಿಯು ನಾವೇ ಕಬ್ಜಾದಲ್ಲಿರುವುದಾಗಿ ಎಂದು ನುಡಿದಿರುತ್ತಾರೆ. ಸದರಿ ಅಂಶವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಂತರ ಸದರಿಯವರು 3 ಮತ್ತು 4 ನೇ ಪ್ರತಿವಾದಿಗೆ ಜಮೀನನ್ನು ಖರೀದಿ ಕೊಡುವವರೆಗೆ ಸದರಿಯವರೇ ಕಬ್ಜಾದಲ್ಲಿದ್ದರು ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ಬೇರೆ ಆಸ್ತಿಯನ್ನು ಹೊಂಬಳ ಗ್ರಾಮದಲ್ಲಿ ಖರೀದಿಸಲು ಹಾಗೂ ಮನೆತನದ ಅಡಚಣೆಗಾಗಿ ಸದರಿ ಆಸ್ತಿಯನ್ನು 3 ಮತ್ತು 4 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಂತರ ಸದರಿ ಖರೀದಿ ದಿನಾಂಕಃ 22-10-2021 ರಂದು ನೋಂದಣಿಯಾಗಿರುತ್ತದೆ ಎಂದರೆ ಇರಬಹುದು. ಸದರಿ ಖರೀದಿಯಾದಾಗಿನಿಂದ 3 ರಿಂದ 5 ನೇ ಪ್ರತಿವಾದಿ ಸದರಿ ಜಮೀನಿನ ಕಬ್ಜಾದಲ್ಲಿದ್ದಾರೆ ಎಂದರೆ ಸರಿ. ಜಮೀನಿನ ಮೌಲ್ಯ ಹೆಚ್ಚಾದ ಕಾರಣ ನಾನು, ನನ್ನ ತಂದೆ-ತಾಯಿ ಹಾಗೂ ಸಹೋದರ ಸೇರಿ ಸುಳ್ಳು ದಾವೆ ಸಲ್ಲಿಸಿರುತ್ತೇವೆ ಎಂದರೆ ಸರಿಯಲ್ಲ. ನನ್ನ ತಂದೆ ಸಂಪೂರ್ಣ ಹಣ ಪಡೆದು ಖರೀದಿ ಪತ್ರ ಬರೆದುಕೊಟ್ಟಿದ್ದು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಖರೀದಿ ಪತ್ರ ನನಗೆ ಬಂಧನಕಾರಿಯಾಗಿರುತ್ತದೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಸುಳ್ಳು ಅಂಶಗಳನ್ನು ಪ್ರತಿಪಾದಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ತಂದೆ ಜಮೀನನ್ನು ಮಾರಾಟ ಮಾಡಿ ಬಂದ ಹಣವನ್ನು ನಮ್ಮ ಕುಟುಂಬಕ್ಕಾಗಿ ವಿನಿಯೋಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ವಿಷಯ ನನಗೆ ಗೊತ್ತಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮುಂದುವರೆದ ಪಾಟೀ ಸವಾಲುಃ 8 ನೇ ಪ್ರತಿವಾದಿ ಪರ ಶ್ರೀ ಆರ್ ಎಂ ಆರ್ ವಕೀಲರಿಂದಃ**

ಪಾಟೀ ಸವಾಲಿಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**